ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಕಂದಾಯ

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ    ದಿನಾಂಕ : DATE: 14/7/20

# 432 ಎಕರೆವರೆಗೂ ಭೂಮಾಲೀಕತ್ವಕ್ಕೆ ಅವಕಾಶ

ಪ್ರಜಾವಾಣಿ ವಾರ್ತೆ
14-7-2020

ಬೆಂಗಳೂರು: ಕರ್ನಾಟಕ ಭೂಸುಧಾರಣೆ ಕಾಯ್ದೆಗೆ ತಿದ್ದುಪಡಿ ತರಲು ರಾಜ್ಯ ಸರ್ಕಾರ ಹೊರಡಿಸಿದ್ದ ಸುಗ್ರೀವಾಜ್ಞೆಗೆ ರಾಜ್ಯಪಾಲರು ಅಂಕಿತ ಹಾಕಿದ್ದಾರೆ.

5 ಸದಸ್ಯರಿಗಿಂತ ಹೆಚ್ಚಿರುವ ಕುಟುಂಬ ಗರಿಷ್ಠ 432 ಎಕರೆಯವರೆಗೆ ಭೂಮಿ ಹೊಂದಲು ಅವಕಾಶ ಕಲ್ಪಿಸಿರುವ ತಿದ್ದುಪಡಿ, 79ಎ, 79 ಬಿ ಹಾಗೂ ಸಿ ಅಡಿ ಇತ್ಯರ್ಥಕ್ಕೆ ಬಾಕಿ ಇರುವ ಪ್ರಕರಣಗಳನ್ನು ಮುಕ್ತಾಯಗೊಳಿಸಲು ದಾರಿ ಮಾಡಿಕೊಟ್ಟಿದೆ.

ಉಳುವವನಿಗೆ ಭೂಮಿ ಆಶಯದಡಿ 1974ರಲ್ಲಿ ತಂದಿದ್ದ ಭೂಸುಧಾರಣೆ ಕಾಯ್ದೆಗೆ ರಾಜ್ಯ ಸರ್ಕಾರ ತಿದ್ದುಪಡಿ ತರಲು ಮುಂದಾದಾಗ ಪರ–ವಿರೋಧದ ವಾದಗಳು ಎದ್ದಿದ್ದವು. ಭೂಮಿ ಮಾರಲು ಹಾಗೂ ಖರೀದಿಸಲು ಇದ್ದ ದೊಡ್ಡ ಬೇಲಿಯೊಂದನ್ನು ಕಿತ್ತುಹಾಕಿದಂತಾಗಿ, ರೈತರು ಸ್ವತಂತ್ರರಾಗಲಿದ್ದಾರೆ ಎಂಬ ಅಭಿಪ್ರಾಯವೂ ವ್ಯಕ್ತವಾಗಿತ್ತು.

ಸಚಿವ ಸಂಪುಟ ಒಪ್ಪಿಗೆ ಸೂಚಿಸಿದ್ದ ತಿದ್ದುಪಡಿಗಳಿಗೆ ಮತ್ತೊಂದಿಷ್ಟು ಬದಲಾವಣೆ ಮಾಡಿ ಸುಗ್ರೀವಾಜ್ಞೆ ಹೊರಡಿಸಲಾಗಿದೆ.

# 432 ಎಕರೆವರೆಗೂ ಭೂಮಾಲೀಕತ್ವಕ್ಕೆ ಅವಕಾಶ

ಪ್ರ. ವಾ. 14-7-2020

ಒಂದನೇ ಪುಟದಿಂದ...

- ನೀರಾವರಿಯೇತರ ಜಮೀನಾಗಿದ್ದು, ಒಂದು ಕುಟುಂಬದಲ್ಲಿ ಐದು ಸದಸ್ಯರಿಗಿಂತ ಜಾಸ್ತಿ ಇದ್ದರೆ ಹಿಂದೆ 20 ಯೂನಿಟ್ (108 ಎಕರೆ) ಭೂಮಿ ಹೊಂದಬಹುದಿತ್ತು. ಈಗ ಅದನ್ನು 216 ಎಕರೆಗೆ ಹೆಚ್ಚಿಸಲಾಗಿದೆ.
- ಹಿಂದೆ ಗೇಣಿದಾರರಾಗಿದ್ದು, ಈಗ ಭೂಒಡೆಯರಾಗಿದ್ದರೆ ಹಾಗೂ ಐದಕ್ಕಿಂತ ಹೆಚ್ಚಿನ ಸದಸ್ಯರಿರುವ ಕುಟುಂಬದವರಾಗಿದ್ದರೆ 432 ಎಕರೆ ಭೂಮಿಯನ್ನು ಹೊಂದಲು (ಸೆಕ್ಷನ್ 63 ಸಬ್‌ಸೆಕ್ಷನ್ 2ಎ) ಅವಕಾಶ ಕಲ್ಪಿಸಲಾಗಿದೆ. ಇಂತಹ ಕುಟುಂಬಗಳ ಸಂಖ್ಯೆ 8 ಲಕ್ಷದಷ್ಟಿದೆ ಎಂದು ಅಂದಾಜಿಸಲಾಗಿದೆ.
- ಸೆಕ್ಷನ್ 80ರ ಅಡಿ ರೈತರಲ್ಲದವರಿಗೆ ಭೂಮಿಯನ್ನು ವರ್ಗಾವಣೆ ಮಾಡುವಂತಿರಲಿಲ್ಲ. ಆದರೆ, ಆ ನಿರ್ಬಂಧ ತೆಗೆದುಹಾಕಲಾಗಿದೆ. ಆದರೆ, ಎ ದರ್ಜೆಯ (ನೀರಾವರಿಗೆ ಒಳಪಡಿಸಿರುವ ಹಾಗೂ ಅಚ್ಚುಕಟ್ಟು ಪ್ರದೇಶ) ಭೂಮಿಯನ್ನು ವರ್ಗಾವಣೆ ಮಾಡಲು ನಿರ್ಬಂಧ ಹೇರಲಾಗಿದೆ.
- ಕೃಷಿಕುಟುಂಬಕ್ಕೆ ಸೇರಿದವರು, ಹೆಚ್ಚಿನ ಆದಾಯ ಇರುವವರು ಖರೀದಿಸಿದ ಪ್ರಸಂಗದಲ್ಲಿ ಅದನ್ನು ಸರ್ಕಾರದ ಸುಪರ್ದಿಗೆ ಪಡೆಯಲು 79 ಎ, 79 ಬಿ ಅಡಿ ಪ್ರಕರಣ ದಾಖಲಿಸಲು, ಕಾಯ್ದೆ ಉಲ್ಲಂಘಿಸಿದ್ದು ದೃಢಪಟ್ಟರೆ ಮುಟ್ಟುಗೋಲು ಹಾಕಿಕೊಳ್ಳಲು ಅವಕಾಶ ಇತ್ತು. ಇಂತಹ ಸೆಕ್ಷನ್ ಅಡಿ ರಾಜ್ಯದಲ್ಲಿ ಇತ್ಯರ್ಥವಾಗದೇ ಬಾಕಿ ಇರುವ ಪ್ರಕರಣಗಳನ್ನು ಸುಗ್ರೀವಾಜ್ಞೆ ಮುಕ್ತಾಯಗೊಳಿಸಲಿದೆ. ಒಂದು ವೇಳೆ ಜಿಲ್ಲಾಧಿಕಾರಿ ಆದೇಶದ ವಿರುದ್ಧ ಹೈಕೋರ್ಟ್‌ನಲ್ಲಿ ಮೇಲ್ಮನವಿ ಹೋಗಿ, ಪ್ರಕರಣ ವಿಚಾರಣೆ ಹಂತದಲ್ಲಿದ್ದರೆ ಅದನ್ನು ಸುಗ್ರೀವಾಜ್ಞೆ ಆಧರಿಸಿ ವಜಾಗೊಳಿಸುವಂತೆ ಮೇಲ್ಮನವಿದಾರ ಕೋರಬಹುದು. ಆದರೆ, ಈ ಹಿಂದೆ ಜಿಲ್ಲಾಧಿಕಾರಿ ಅಥವಾ ಉಪ ವಿಭಾಗಾಧಿಕಾರಿ ಕೋರ್ಟ್‌ಗಳಲ್ಲಿ ಇತ್ಯರ್ಥವಾಗಿರುವ ಪ್ರಕರಣಗಳಿಗೆ ಈ ಸುಗ್ರೀವಾಜ್ಞೆ ಅನ್ವಯವಾಗುವುದಿಲ್ಲ.